All India Radio: Bangalore
Regional Bulletin In Kannada
22.02.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಹಾಲಿನ ಬೆಲೆ ಹೆಚ್ಚಳ ಕುರಿತು ಸರ್ಕಾರದಿಂದ ಯಾವುದೇ ತೀರ್ಮಾನವಿಲ್ಲ - ಭೀಮಾನಾಯ್ಕ್
- ದೇಶದ ಅಭಿವೃದ್ಧಿಗೆ ಕೃಷಿ ವಲಯದ ಪಾತ್ರ ಮುಖ್ಯ ; ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಪ್ರತಿಪಾದನೆ
- ದೇಶವಾಸಿಗಳನ್ನುದ್ದೇಶಿಸಿ ಆಕಾಶವಾಣಿಯಲ್ಲಿ ನಾಳೆ ಪ್ರಧಾನಿ ಮನದ ಮಾತು
- ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ; ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ಡೆಲ್ಲಿ ಕ್ಯಾಪಿಟಲ್ಸ್-ಯುಪಿ ವಾರಿಯರ್ಸ್ ಮುಖಾಮುಖಿ

<><><><>

ಹಾಲಿನ ಬೆಲೆ ಹೆಚ್ಚಳ ಮಾಡುವ ಬಗ್ಗೆ ಸರ್ಕಾರ ಯಾವುದೇ ತೀರ್ಮಾನ ತೆಗೆದುಕೊಂಡಿಲ್ಲ ಎಂದು ಕೆಎಂಎಫ್ ಅಧ್ಯಕ್ಷ ಭೀಮಾನಾಯ್ಕ್ ಸ್ಪಷ್ಟಪಡಿಸಿದ್ದಾರೆ. ಬಳ್ಳಾರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೀಟರ್‌ಗೆ ೫ ರೂಪಾಯಿ ಹೆಚ್ಚಿಸಬೇಕೆಂದು ಕೆಎಂಎಫ್, ಸರ್ಕಾರಕ್ಕೆ ಸಲಹೆ ಮಾಡಿದೆ. ಈ ಸಂಬಂಧ ಸರ್ಕಾರ, ಅಧಿಕಾರಿಗಳೊಂದಿಗೆ ಸಾಧಕ-ಬಾಧಕ ಪರಿಶೀಲಿಸಿ ತೀರ್ಮಾನ ಕೈಗೊಳ್ಳಲಿದೆ ಎಂದರು. ಹಾಲಿನ ದರ ಹೆಚ್ಚಿಸುವಂತೆ ರೈತರು, ವಿವಿಧ ಸಂಘಟನೆಗಳು ಮತ್ತು ಪಶು ಸಂಗೋಪನಾ ಇಲಾಖೆಯಿಂದ ಒತ್ತಡ ಬರುತ್ತಿದೆ. ಆದರೂ ರಾಜ್ಯ ಸರ್ಕಾರ ದರ ಏರಿಕೆ ವಿಚಾರದಲ್ಲಿ ಯಾವುದೇ ಅಂತಿಮ ನಿರ್ಧಾರಕ್ಕೆ ಬಂದಿಲ್ಲ ಎಂದು ಕೆಎಂಎಫ್ ಅಧ್ಯಕ್ಷರು ಸ್ಪಷ್ಟ ಪಡಿಸಿದರು.

<><><><>

ಚಿತ್ರದುರ್ಗ ಜಿಲ್ಲೆಗೆ ಅವಶ್ಯಕವಿರುವ ೨೬ ವಿದ್ಯುತ್ ಉಪಕೇಂದ್ರಗಳನ್ನು ಈ ವರ್ಷವೇ ಆರಂಭಿಸಲಾಗುವುದು ಎಂದು ಯೋಜನಾ ಖಾತೆ ಸಚಿವ ಡಿ. ಸುಧಾಕರ್ ಹೇಳಿದ್ದಾರೆ. ಚಿತ್ರದುರ್ಗ ಜಿಲ್ಲೆ ಹೊಳಲ್ಕೆರೆ ತಾಲೂಕಿನ ಅರಸನಘಟ್ಟ ಗ್ರಾಮದಲ್ಲಿ ೧೨ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ವಿದ್ಯುತ್ ಉಪಕೇಂದ್ರ ಉದ್ಘಾಟಿಸಿ ಅವರು ಮಾತನಾಡಿದರು. ದಿನದ ೨೪ ಗಂಟೆ

ವಿದ್ಯುತ್ ಪೂರೈಸುವ ರಾಜ್ಯ ಸರ್ಕಾರದ ವಾಗ್ದಾನದಂತೆ ಗ್ರಾಮೀಣ ಭಾಗದಲ್ಲಿ ವಿದ್ಯುತ್ ಒದಗಿಸಲು ಉಪಕೇಂದ್ರಗಳ ನಿರ್ಮಾಣಕ್ಕೆ ಆದ್ಯತೆ ನೀಡಲಾಗಿದೆ. ಬೇಸಿಗೆ ದಿನಗಳಲ್ಲಿ ಯಾವುದೇ ಕಾರಣಕ್ಕೂ ಲೋಡ್ ಶೆಡ್ಡಿಂಗ್ ಮಾಡಲಾಗುವುದಿಲ್ಲ ಎಂದು ಸಚಿವ ಸುಧಾಕರ್ ಸ್ಪಷ್ಟಪಡಿಸಿದರು.

ಧ್ವನಿ : ಡಿ. ಸುಧಾಕರ್ (೨೭ ಸೆಕೆಂಡ್ಸ್)

<><><><>

ವಿದ್ಯಾರ್ಥಿಗಳಲ್ಲಿ ಶಿಸ್ತು, ರಾಷ್ಟ್ರಪ್ರೇಮ ಬೆಳೆಸುವ ಸ್ಕೌಟ್ಸ್ ಮತ್ತು ಗೈಡ್ಸ್ ಅನುಷ್ಠಾನದಲ್ಲಿ ಕರ್ನಾಟಕ ದೇಶದಲ್ಲೇ ಮೊದಲ ಸ್ಥಾನದಲ್ಲಿದೆ ಎಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ ಉತ್ತಮ ಶಿಕ್ಷಕ, ಶಿಕ್ಷಕಿ ಪ್ರಶಸ್ತಿ ಪಡೆದ ಸ್ಕೌಟ್ಸ್ ಮತ್ತು ಗೈಡ್ಸ್‌ಗಳಿಗೆ ಪ್ರಮಾಣ ಪತ್ರ ವಿತರಿಸಿ ಅವರು ಮಾತನಾಡಿದರು. ಭಾರತ್ ಗೈಡ್ಸ್ ಕರ್ನಾಟಕ ರಾಜ್ಯ ಆಯುಕ್ತ ಗೀತಾ ನಟರಾಜ್ ಮೊದಲಾದವರು ಭಾಗಿಯಾಗಿದ್ದರು.

<><><><>

ದೇಶದ ಅಭಿವೃದ್ಧಿಗೆ ಕೃಷಿ ವಲಯದ ಪಾತ್ರ ಮುಖ್ಯವಾಗಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿಂದು ಆರಂಭವಾದ ಕೃಷಿ ವಿಜ್ಞಾನ ಮೇಳ-೨೦೨೫ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ರಧಾನಿ ನರೇಂದ್ರ ಮೋದಿ, ನೇತೃತ್ವದಲ್ಲಿ ದೇಶವನ್ನು ವಿಕಸಿತ ಭಾರತವಾಗಿಸುವ ಅಭಿಯಾನ ಮುಂದುವರಿದಿದೆ. ಹಾಗೆಯೇ ವಿಕಸಿತ ಭಾರತದ ಸಾಕಾರ, ಕೃಷಿ ವಲಯ ಹಾಗೂ ರೈತರ ಸಹಕಾರವಿಲ್ಲದೆ ಸಾಧ್ಯವಿಲ್ಲ. ಇಂದೂ ಕೂಡ ಕೃಷಿ, ದೇಶದ ಆರ್ಥಿಕತೆಯ ಬೆನ್ನೆಲುಬಾಗಿದೆ ಎಂದು ಹೇಳಿದರು. ಉನ್ನತ ಕೃಷಿ - ವಿಕಸಿತ ಭಾರತ ಎಂಬುದು ಈ ಮೇಳದ ಧ್ಯೇಯವಾಕ್ಯವಾಗಿದೆ. ಭಾರತೀಯ ಕೃಷಿ ಸಂಶೋಧನಾ ಸಂಸ್ಥೆ ಅಭಿವೃದ್ಧಿಪಡಿಸಿರುವ ವಿವಿಧ ತಂತ್ರಜ್ಞಾನ ಹಾಗೂ ಕೃಷಿ ಸಂಬಂಧಿ ವ್ಯವಸ್ಥೆಗಳ ನೇರ ಪ್ರಾತ್ಯಕ್ಷಿಕೆಗಳು ಈ ಮೇಳದ ಪ್ರಮುಖ ಆಕರ್ಷಣೆಯಾಗಿದೆ.

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಅನಿಸಿಕೆ ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ನ ೧೧೯ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಬಿತ್ತರಗೊಳ್ಳಲಿದೆ. ಅಲ್ಲದೇ, ಎಐಆರ್

ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಪ್ರಧಾನಿ ಅವರ ಭಾಷಣ ಪ್ರಸಾರವಾಗಲಿದೆ.

<><><><>

ಗ್ರಾಮೀಣ ಪ್ರದೇಶದಲ್ಲಿ ೨೦೧೪ ರಲ್ಲಿ ಸರಾಸರಿ ಹನ್ನೆರಡೂವರೆ ಗಂಟೆ ಕಾಲ ವಿದ್ಯುತ್ ಪೂರೈಕೆಯಾಗುತ್ತಿದ್ದು. ಇದರ ಪ್ರಮಾಣವನ್ನು ೨೨ ಗಂಟೆಗೆ ಹೆಚ್ಚಿಸಲಾಗಿದೆ ಎಂದು ಕೇಂದ್ರ ಇಂಧನ ಸಚಿವ ಮನೋಹರ್ ಲಾಲ್ ಕಟ್ಟರ್ ಹೇಳಿದ್ದಾರೆ. ದೆಹಲಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ೨೦೩೦ ರ ವೇಳೆಗೆ ವಿದ್ಯುತ್ ಚಾಲಿತ ವಾಹನಗಳಿಗೆಂದು ೧ ಲಕ್ಷ ಚಾರ್ಜಿಂಗ್ ಕೇಂದ್ರಗಳನ್ನು ಸ್ಥಾಪಿಸುವ ಗುರಿ ಹೊಂದಲಾಗಿದೆ. ದೀನ ದಯಾಳ್ ಉಪಾಧ್ಯಾಯ ಗ್ರಾಮ ಜ್ಯೋತಿ ಯೋಜನೆ, ಪಿಎಂ ಸಹಜ್ ಬಿಜಲಿ ಹರ್ ಘರ್ ಯೋಜನಾ ಸೇರಿದಂತೆ ಕೇಂದ್ರದ ವಿವಿಧ ಯೋಜನೆಗಳ ಸಹಕಾರದೊಂದಿಗೆ ದೇಶದಲ್ಲಿ ವಿದ್ಯುತ್ ಉತ್ಪಾದನೆ ಹೆಚ್ಚಾಗಿದೆ ಎಂದು ತಿಳಿಸಿದರು.

<><><><>

ಸಣ್ಣ ಹಣಕಾಸು ಸಂಸ್ಥೆಗಳು, ಲೇವಾದೇವಿಗಾರರು, ಬ್ಯಾಂಕೇತರ ಹಣಕಾಸು ಸಂಸ್ಥೆಗಳು ಬಲವಂತದ ಸಾಲ ವಸೂಲಿಗೆ ಮುಂದಾದರೆ ಕಾನೂನು ಕ್ರಮ ಜರುಗಿಸಲಾಗುವುದು ಎಂದು ದಾವಣಗೆರೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾಪ್ರಶಾಂತ್ ತಿಳಿಸಿದ್ದಾರೆ. ನೂತನ ಸುಗ್ರೀವಾಜ್ಞೆ ಕುರಿತು ಮೈಕ್ರೋಫೈನಾನ್ಸ್ ಮತ್ತು ಸಣ್ಣ ಹಣಕಾಸು ಸಂಸ್ಥೆಗಳು ಪ್ರತಿನಿಧಿಗಳಿಗೆ ಹಮ್ಮಿಕೊಂಡಿದ್ದ ತಿಳಿವಳಿಕೆ ಸಭೆಯಲ್ಲಿ ಮಾತನಾಡಿದ ಅವರು, ಹೊಸ ಕಾಯ್ದೆಯನ್ವಯ, ಎಲ್ಲಾ ಹಣಕಾಸು ಸಂಸ್ಥೆಯವರು ಮಾರ್ಚ್ ೧೨ ರೊಳಗಾಗಿ, ಆಯಾ ಜಿಲ್ಲಾಧಿಕಾರಿಗಳಿಂದ ನೋಂದಣಿ ಮಾಡಿಸಿಕೊಂಡು ನಿಯಮಬದ್ಧವಾಗಿ ವ್ಯವಹಾರ ಮಾಡಬೇಕು ಎಂದರು.

ಧ್ವನಿ : ಉಮಾಪ್ರಶಾಂತ್ .ಎಸ್.ಪಿ (೩೮ ಸೆಕೆಂಡ್ಸ್)

ಸಾಲಗಾರರಿಗೆ ಕಿರುಕುಳ, ಮಾನಸಿಕ ಒತ್ತಡ ನೀಡಿದಲ್ಲಿ, ಪೊಲೀಸ್ ಉಪ ಅಧೀಕ್ಷಕರ ಮೂಲಕ ಸ್ವಯಂ ಪ್ರಕರಣ ದಾಖಲಿಸುವ ಅಧಿಕಾರ ಕಾಯಿದೆಯಲ್ಲಿದೆ. ತಪ್ಪಿತಸ್ಥರೆಂದು ಕಂಡುಬಂದಲಿ, ೧೦ ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ ದಂಡವಿಧಿಸಲಾಗುತ್ತದೆ ಎಂದು ತಿಳಿಸಿದರು.

<><><><>

ಗದಗ ಜಿಲ್ಲೆಯ ರೋಣ ತಾಲೂಕಿನ ಹೊಳೆ ಮಣ್ಣೂರು ಗ್ರಾಮದಲ್ಲಿ ಶಾಲಾ ಮಕ್ಕಳೇ ನಡೆಸುವ ಸ್ಕೂಲ್ ಬ್ಯಾಂಕ್ ತೆರೆಯಲಾಗಿದೆ. ರೋಣ ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ

ಚಂದ್ರಶೇಖರ ಕಂದಕೂರ ಈ ಬ್ಯಾಂಕ್‌ಗೆ ಚಾಲನೆ ನೀಡಿದ್ದಾರೆ. ವಿದ್ಯಾರ್ಥಿಗಳಲ್ಲಿ ಉಳಿತಾಯ ಮನೋಭಾವ ಬೆಳೆಸುವುದು ಮತ್ತು ಬ್ಯಾಂಕಿಂಗ್ ವ್ಯವಹಾರಗಳ ಬಗ್ಗೆ ಜಾಗೃತಿ ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ಈಗಾಗಲೇ ಶೇಕಡ ೫೦ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಬ್ಯಾಂಕ್ ಖಾತೆ ತೆರೆದಿದ್ದಾರೆ ಎಂದು ಚಂದ್ರಶೇಖರ ಕಂದಕೂರ ಆಕಾಶವಾಣಿಗೆ ಮಾಹಿತಿ ನೀಡಿದರು.

ಧ್ವನಿ : ಚಂದ್ರಶೇಖರ ಕಂದಕೂರ (೨೫ ಸೆಕೆಂಡ್ಸ್)

<><><>

ಕೇಂದ್ರ ಬಜೆಟ್, ಅಭಿವೃದ್ಧಿಗೆ ಪೂರಕವಾಗಿದೆ ಎಂದು ಸಂಸದ ಎಂ. ಮಲ್ಲೇಶ್ ಬಾಬು ಹೇಳಿದ್ದಾರೆ. ಕೋಲಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಣ್ಣ ಕೈಗಾರಿಕೆಗಳ ಉತ್ತೇಜನಕ್ಕೆ ಹಲವು ಕ್ರಮ ಕೈಗೊಳ್ಳಲಾಗಿದೆ. ರೈತರು, ಮಹಿಳೆಯರು, ಯುವಕರಿಗೆ ಹೆಚ್ಚಿನ ಅನುಕೂಲವಾಗುವಂತಹ ಯೋಜನೆಗಳಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ರಫ್ತಿಗೆ ಆದ್ಯತೆ ನೀಡಿರುವುದರಿಂದ, ರೈತರಿಗೆ ಅನುಕೂಲವಾಗಲಿದ್ದು, ಇದರಿಂದ ಆರ್ಥಿಕ ಪ್ರಗತಿ ಸಾಧಿಸಬಹುದಾಗಿದೆ ಎಂದು ಹೇಳಿದರು. ಮಾಜಿ ಸಂಸದ ಎಸ್. ಮುನಿಸ್ವಾಮಿ ಮಾತನಾಡಿ, ಕಳೆದ ೨ ವರ್ಷಗಳಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕೈಗೊಂಡ ಅಭಿವೃದ್ಧಿ ಕಾರ್ಯಗಳ ಬಗ್ಗೆ ಶ್ವೇತಪತ್ರ ಹೊರಡಿಸಬೇಕೆಂದು ಒತ್ತಾಯಿಸಿದರು.

<><><>

ಕನ್ನಡ ಸಾಹಿತ್ಯ ಲೋಕದ ಶಿಶು ಗೀತೆಗಳ ಜನಕ, ಪಂಜೆ ಮಂಗೇಶರಾವ್ ಜನ್ಮ ದಿನ ಇಂದು. ಕನ್ನಡ ಸಾಹಿತ್ಯ ಕ್ಷೇತ್ರಕ್ಕೆ ಅವರು ನೀಡಿದ ಕೊಡುಗೆ ಅನನ್ಯ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ತಮ್ಮ ಎಕ್ಸ್ ಖಾತೆಯಲ್ಲಿ ಸ್ಮರಿಸಿದ್ದಾರೆ. ಮಂಗೇಶರಾವ್, 'ಕವಿಶಿಷ್ಯ ಕಾವ್ಯನಾಮದಿಂದ ಖ್ಯಾತರಾಗಿದ್ದರು ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸ್ಮರಿಸಿ, ಗೌರವ ನಮನ ಸಲ್ಲಿಸಿದ್ದಾರೆ.

<><><>

ದೇಶದ ಸಮಗ್ರ ಪ್ರಗತಿಗೆ ಶಿಕ್ಷಣ ಪ್ರಮುಖವಾಗಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ. ದೆಹಲಿ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಭಾರತವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಲು ಹೊಸ ರಾಷ್ಟ್ರೀಯ ಶಿಕ್ಷಣ ನೀತಿ ರೂಪಿಸಲಾಗಿದೆ ಎಂದು ತಿಳಿಸಿದರು.

<><><>

ಸಂಕ್ಷಿಪ್ತ ಸುದ್ದಿಗಳು

- ಮೇಘಾಲಯದ ರಾಜ್ಯಪಾಲ ಸಿ.ಹೆಚ್. ವಿಜಯಶಂಕರ್ ಕೊಪ್ಪಳದ ಗವಿ ಸಿದ್ದೇಶ್ವರ ಮಠಕ್ಕೆ ಭೇಟಿ ನೀಡಿ, ಗದ್ದುಗೆ ದರ್ಶನ ಪಡೆದರು. ನಂತರ ಮಠದ ಸ್ವಾಮೀಜಿಗಳೊಂದಿಗೆ ಸೌಹಾರ್ದ ಮಾತುಕತೆ ನಡೆಸಿದರು.
- ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರಿನಲ್ಲಿ ಬಜೆಟ್ ಪೂರ್ವ ತಯಾರಿ ಸಭೆ ನಡೆಸುತ್ತಿದ್ದು, ಇಂದು ಆರ್ಥಿಕ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಲಿದ್ದಾರೆ.

<><><><>

ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯದಲ್ಲಿ ಇಂದು ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಯುಪಿ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಇಂದು ಸಂಜೆ ೭.೩೦ ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>